



ಅರುಣ ಪಿ. ಭಟ್ಟ

## ವಾರಭವಿಷ್ಯ 11.6.2020ರಿಂದ 17.6.2020ರವರೆಗೆ




ದಾನ ಧರ್ಮ ಕಾರ್ಯಗಳಲ್ಲಿ ಆಸಕ್ತಿ ಮೂಡುತ್ತದೆ. ಉದ್ಯೋಗ ವಿಚಾರದಲ್ಲಿ ಅಧಿಕಾರಿಗಳ ಜತೆಗೆ ಮಾತುಕತೆ ನಡೆಸುವ ಯೋಗ ಇದೆ. ಸೋದರ ಸೋದರಿಯರ ಜತೆಗೆ ಬಾಂಧವ್ಯ ಗಟ್ಟಿಯಾಗುತ್ತದೆ. ಸಾಮಾಜಿಕ ಸ್ಥಾನಮಾನ ಉತ್ತಮವಾಗುತ್ತದೆ. ಕಿರು ಪ್ರಯಾಣ ಮಾಡುವ ಯೋಗ ಇದೆ. ಆರೋಗ್ಯದಲ್ಲಿ ಏರಿಳಿತ ಇರುತ್ತದೆ. ಶುಭದಿನ 12. ಸೌಂದರ್ಯ ಲಹರಿ ಪಠಿಸಿರಿ.




ವಿದೇಶ ವ್ಯವಹಾರದಲ್ಲಿ ಪ್ರಗತಿ ಇದೆ. ವಿದೇಶದಲ್ಲಿ ಇರುವವರಿಗೆ ಪ್ರಗತಿ ಇದೆ. ಈವರೆಗೆ ನೀವು ಎದುರಿಸುತ್ತಿರುವ ಸಮಸ್ಯೆಗಳನ್ನು ಇತರರ ನೆರವಿನಿಂದ ಬಗೆಹರಿಸಿಕೊಳ್ಳಬಹುದು. ಪ್ರೀತಿಪಾತ್ರರಿಂದ ದೂರ ಆಗುವ ಸಾಧ್ಯತೆ ಇದೆ. ಮನೆಗೆ ಅಗತ್ಯ ಇರುವ, ದುಬಾರಿ ವಸ್ತುಗಳನ್ನು ಖರೀದಿಸುವ ಯೋಗ ಇದೆ. ವೈಯಕ್ತಿಕ ಸಂಬಂಧದ ಸುಧಾರಣೆಯಾಗಲಿದೆ. ಶುಭದಿನ 13. ಹನುಮಾನ್ ಚಾಲೀಸ್ ಓದಿರಿ.




ಸಂತಾನ ಅಪೇಕ್ಷಿತ ದಂಪತಿಗೆ ಶುಭ ಸುದ್ದಿ. ವಿದ್ಯಾರ್ಥಿಗಳಿಗೆ ಶೈಕ್ಷಣಿಕ ರಂಗದಲ್ಲಿ ಪ್ರಗತಿ. ಹಿರಿಯರ ನೆರವು ಮತ್ತು ಮಾರ್ಗದರ್ಶನ ದೊರೆಯಲಿದೆ. ಹೆಚ್ಚುವರಿ ಆದಾಯವನ್ನು ಮುಂದಿನ ಹಂತಕ್ಕೆ ತೆಗೆದುಕೊಂಡು ಹೋಗಲು ಸೂಕ್ತ ವೇದಿಕೆ ದೊರೆಯಲಿದೆ. ವಿರೋಧಿಗಳು ಈಗ ಅನಗತ್ಯ ವಾಗ್ವಾದಗಳನ್ನು ಎಳೆದು ತರಬಹುದು. ಶುಭದಿನ 14. ಶ್ರೀ ದತ್ತಗುರು ಸ್ತೋತ್ರ ಪಠಿಸಿರಿ.




ವೃತ್ತಿ ಸೇವಾ ವಲಯದಲ್ಲಿ ಇರುವವರಿಗೆ ಅಂದುಕೊಂಡಂಥ ಫಲಿತಾಂಶ ದೊರೆಯಲಿದೆ. ನಿಮ್ಮ ಯೋಜನೆಗಳು ಹಾಗೂ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಮೇಲಧಿಕಾರಿಗಳ ಜತೆ ಮುಖ್ಯವಾದ ಚರ್ಚೆಯಲ್ಲಿ ತೊಡಗಿಕೊಳ್ಳಲಿದ್ದೀರಿ. ಈ ಹಿಂದಿನ ಆರೋಗ್ಯ ಸಮಸ್ಯೆಗಳು ನಿವಾರಣೆ ಆಗುವ ಸಾಧ್ಯತೆಯಿದೆ. ಆತ್ಮೀಯರೊಂದಿಗೆ ಭಿನ್ನಾಭಿಪ್ರಾಯಗಳು ಕಾಣಿಸಿಕೊಳ್ಳಬಹುದು. ಶುಭದಿನ 13. ಲಿಂಗಾಷ್ಟಕ ಪಠಿಸಿರಿ.




ಸರ್ಕಾರ ಕೆಲಸಗಳು ಆಗಬೇಕಿದ್ದಲ್ಲಿ ಅನುಕೂಲ ಇದೆ. ನೀವು ಕೆಲಸ ಮಾಡುತ್ತಿರುವ ಸಂಸ್ಥೆಯಲ್ಲಿ ಗೌರವ ಸಿಗುವ ಯೋಗ ಇದೆ. ಈ ಅವಧಿಯಲ್ಲಿ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳುವ ಅವಕಾಶ ಇದೆ. ವೃತ್ತಿಪರ ಕೆಲಸಗಳನ್ನು ಈ ಹಿಂದಿಗಿಂತಲೂ ಪರಿಣಾಮಕಾರಿಯಾಗಿ ಮಾಡುವಿರಿ. ಹಿರಿಯ ಸಹೋದ್ಯೋಗಿಗಳ ಬೆಂಬಲ ಉತ್ತಮವಾಗಿರುತ್ತದೆ. ಶುಭದಿನ 13. ಕಾಲಭೈರವನ ಸೇವೆ ಮಾಡಿರಿ.




ಬಂಧುಗಳೊಂದಿಗೆ ಉತ್ತಮವಾದ ಕ್ಷಣಗಳನ್ನು ಕಳೆಯಲಿದ್ದೀರಿ. ಕಾನೂನು ವ್ಯಾಜ್ಯಗಳು ಇದ್ದಲ್ಲಿ ನಿಮ್ಮ ಪರವಾದ ಬೆಳವಣಿಗೆಗಳು ಆಗಲಿವೆ. ಸರಿಯಾದ ಸಮಯಕ್ಕೆ ವಿರೋಧಿಗಳಿಗೆ ತಕ್ಕ ಪ್ರತ್ಯುತ್ತರ ನೀಡಲಿದ್ದೀರಿ. ಸಾಮಾಜಿಕ ರಾಜಕೀಯ ಕ್ಷೇತ್ರದಲ್ಲಿ ಇರುವವರಿಗೆ ಮನ್ನಣೆ ಸಿಗಲಿದೆ. ಆರೋಗ್ಯ ಸಮಸ್ಯೆಗೆ ಸೂಕ್ತ ವೈದ್ಯರ ಮಾರ್ಗದರ್ಶನ ದೊರೆಯಲಿದೆ. ಶುಭದಿನ 16. ಶ್ರೀ ಲಕ್ಷ್ಮೀಕನಕಧಾರಾ ಸ್ತೋತ್ರ ಪಠಣ ಮಾಡಿರಿ.




ವೈವಾಹಿಕ ಜೀವನ ಸಂತೋಷವಾಗಿ ಇರುವ ಸಮಯ. ಈ ಹಿಂದಿನ ಭಿನ್ನಾಭಿಪ್ರಾಯ, ಮನಸ್ತಾಪಗಳನ್ನು ಮರೆಯಲಿದ್ದೀರಿ. ಸಂಗಾತಿ, ಮಕ್ಕಳಿಗೆ ಇರುವ ಭಿನ್ನ ಆಲೋಚನೆಗಳನ್ನು ಸಹ ಒಂದು ಹಂತಕ್ಕೆ ಸರಿಪಡಿಸುವಿರಿ. ವೃತ್ತಿನಿರತರಿಗೆ ಅಂದುಕೊಂಡ ಹುದ್ದೆಯನ್ನು ತಲುಪಿಕೊಳ್ಳುವ ಅವಕಾಶ ಇದೆ. ವೈಯಕ್ತಿಕ ಸಂಬಂಧದಲ್ಲೂ ಉತ್ತಮ ಬೆಳವಣಿಗೆ ಕಂಡುಬರಲಿದೆ. ಶುಭದಿನ 16. ವಿಷ್ಣು ಸಹಸ್ರನಾಮ ಪಠಿಸಿರಿ.




ವೃತ್ತಿಪರ ಜೀವನದಲ್ಲಿ ಅತ್ಯುತ್ತಮವಾದ ಪ್ರಗತಿ ಇದೆ. ಹಣಕಾಸು ಹೂಡಿಕೆಯಲ್ಲಿ ಪ್ರಗತಿ ಸಾಧಿಸುವಿರಿ. ವಿರೋಧಿಗಳು ಸಣ್ಣ ಪುಟ್ಟ ಸಮಸ್ಯೆಗಳನ್ನು ಮಾಡಬಹುದು. ವೈವಾಹಿಕ ಜೀವನ ಸಂತೋಷವಾಗಿರುವುದಕ್ಕೆ ಬಹಳ ಶ್ರಮ ವಹಿಸುತ್ತೀರಿ. ಅವಿವಾಹಿತರಿಗೆ ಸೂಕ್ತ ಸಂಬಂಧಗಳು ದೊರೆಯುವ ಯೋಗ ಇದೆ. ಉನ್ನತ ಸ್ಥಾನ– ಮಾನ, ಗೌರವ ದೊರೆಯಲಿದೆ. ಶುಭದಿನ 14. ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ಮಕ್ಕಳ ವೃತ್ತಿ ಜೀವನಕ್ಕೆ ಸಹಾಯ ಮಾಡಲಿದ್ದೀರಿ. ಪ್ರೀತಿ ಪ್ರೇಮದಲ್ಲಿ ಇರುವವರಿಗೆ ಬಂಧ ಇನ್ನಷ್ಟು ಗಟ್ಟಿಯಾಗಲಿದೆ. ಸೇವಾ ವಲಯ ಅಥವಾ ವ್ಯಾಪಾರ ಕ್ಷೇತ್ರದಲ್ಲಿ ಇರುವವರಿಗೆ ಏಳ್ಗೆ ಇದೆ. ಹಣಕಾಸು ಹೂಡಿಕೆಯಲ್ಲಿ ಅಂದುಕೊಂಡಂಥ ಫಲಿತಾಂಶ ದೊರೆಯಲಿದೆ. ಸೋದರ ಸಂಬಂಧಿಗಳ ಜತೆಗಿನ ಬಾಂಧವ್ಯ ಗಟ್ಟಿಯಾಗಲಿದೆ. ಶುಭದಿನ 13. ಗುರು ರಾಘವೇಂದ್ರರಾಯರ ಆರಾಧನೆ ಮಾಡಿರಿ




ಭೂಮಿ ಖರೀದಿ ವಿಚಾರದಲ್ಲಿ ಅಂದುಕೊಂಡಂತೆ ಬೆಳವಣಿಗೆಗಳು ಆಗಲಿವೆ. ಮನೆ ದುರಸ್ತಿಗೆ ಹೆಚ್ಚಿನ ಖರ್ಚು ಮಾಡಲಿದ್ದೀರಿ. ಹಣಕಾಸು ವಿಚಾರದಲ್ಲಿ ಈ ವಾರ ಹಲವು ಸಕಾರಾತ್ಮಕವಾದ ಬದಲಾವಣೆಗಳನ್ನು ಗಮನಿಸಬಹುದು. ಪೋಷಕರ ಜತೆಗಿನ ಬಾಂಧವ್ಯ ಇನ್ನಷ್ಟು ಗಟ್ಟಿಯಾಗುತ್ತದೆ. ಆರೋಗ್ಯ ವಿಚಾರದಲ್ಲಿ ಸ್ವಲ್ಪ ಎಚ್ಚರಿಕೆಯಿಂದ ಇರಬೇಕು. ಶುಭದಿನ 12. ಶಿವಕವಚ ಪಠಣ ಮಾಡಿರಿ.




ತಾಂತ್ರಿಕ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಉತ್ತಮ ಸಮಯ ಇದು. ಆದರೆ ಯಾವುದೇ ಕೆಲಸಕ್ಕೆ ಹೆಚ್ಚು ಶ್ರಮ ಹಾಕಬೇಕಾಗುತ್ತದೆ. ಸೇವೆ ಮತ್ತು ವ್ಯಾಪಾರ ಕ್ಷೇತ್ರದಲ್ಲಿ ಇರುವವರಿಗೆ ಅಂದುಕೊಂಡಂಥ ಫಲಿತಾಂಶ ದೊರೆಯಲಿದೆ. ವೈಯಕ್ತಿಕ ಸಂಬಂಧದಲ್ಲಿ ಸಂತೋಷ ಇರುತ್ತದೆ. ಹೆಚ್ಚುವರಿ ಆದಾಯ ಮೂಲದಿಂದ ಹಣಕಾಸಿನ ಹರಿವು ಹೆಚ್ಚಾಗಲಿದೆ. ಶುಭದಿನ 11. ಆದಿತ್ಯ ಹೃದಯ ಪಠಣ ಮಾಡಿರಿ.




ಸ್ಥಿರಾಸ್ತಿ ವ್ಯವಹಾರಗಳಿಗೆ ಸಂಬಂಧಿಸಿದಂತೆ ಪ್ರಗತಿ. ಪೋಷಕರ ಜತೆಗೆ ಈ ಹಿಂದೆ ಮನಸ್ತಾಪಗಳು ಆಗಿದ್ದಲ್ಲಿ ಅವುಗಳನ್ನು ನಿವಾರಣೆ ಮಾಡಿಕೊಳ್ಳಲಿದ್ದೀರಿ. ಕುಟುಂಬದಲ್ಲಿನ ಒಗ್ಗಟ್ಟು ಎಷ್ಟು ಮುಖ್ಯ. ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕಾಗುತ್ತದೆ. ಭವಿಷ್ಯವನ್ನು ಉತ್ತಮಪಡಿಸಿಕೊಳ್ಳಲು ಕೆಲವು ಯೋಜನೆಗಳನ್ನು ರೂಪಿಸಲಿದ್ದೀರಿ. ಶುಭದಿನ 12. ಶ್ರೀರಾಮರಕ್ಷಾ ಸ್ತೋತ್ರ ಓದಿರಿ.